ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 15 ನೇ ಡಿಸೆಂಬರ್, 2020

ಖಾಲಿ ಹುದ್ದೆಗಳ ಭರ್ತಿ ಮಾಡುವ ಬಗ್ಗೆ

ಶ್ರೀ ರಘುನಾಥ್ ರಾವ್ ಮಲ್ಕಾಪೂರೆ(ವಿಧಾನಸಭೆಯಿಂದ ಚುನಾಯಿತರಾದವರು) –

92 (835) ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ಸ್ಥಳೀಯ ಸಂಸ್ಥೆಗಳಲ್ಲಿ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು; (ನಗರ ಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳವಾರು ಸ್ಪಷ್ಟ ಮಾಹಿತಿ ನೀಡುವುದು)

(ಆ) ಖಾಲಿಯಿರುವ ವಿವಿಧ ಹುದ್ದೆಗಳನ್ನು ಭರ್ತಿ ಮಾಡದೇ ಇರುವುದರಿಂದ ಸಾರ್ವಜನಿಕರಿಗೆ ಸ್ಥಳೀಯ ಸಂಸ್ಥೆಗಳಲ್ಲಿ ತುಂಬಾ ಅನಾನುಕೂಲಗಳು ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)

(ಇ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರವು ಕೂಡಲೇ ಕೈಗೊಂಡ ಕ್ರಮಗಳೇನು; (ಮಾಹಿತಿ ಒದಗಿಸುವುದು)

(ಈ) ಬೀದರ್ ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿಗಳಲ್ಲಿ ಅನೇಕ ಅಧಿಕಾರಿ/ನೌಕರರು ಅನ್ಯ ಇಲಾಖೆ ಮತ್ತು ಸ್ವಂತ ವೇತನ ಶ್ರೇಣಿಗಳ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವುದರಿಂದ ಸಾರ್ವಜನಿಕರಿಗೆ ಮತ್ತು ಕಾಮಗಾರಿ ಅನುಷ್ಠಾನಗಳಲ್ಲಿ ಅಡಚಣೆ ಉಂಟಾಗಿದ್ದು, ಅದನ್ನು ಪರಿಹರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ಒದಗಿಸುವುದು)